**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **521 (576)** |
| **ಸದಸ್ಯರ ಹೆಸರು** | : | **ಶ್ರೀ ರಘು. ಆರ್ (ವಿಧಾನಸಭೆಯಿಂದ ಚುನಾಯಿತರಾದವರು)** |
| **ದಿನಾಂಕ** | : | **20.08.2026** |
| **ಉತ್ತರಿಸುವ ಸಚಿವರು** | : | **ಮಾನ್ಯ ನಗರಾಭಿವೃದ್ಧಿ ಸಚಿವರು** |

| **ಕ್ರ.ಸಂ** | **ಪ್ರಶ್ನೆ** | **ಉತ್ತರ** |
|---|---|---|
| ಅ) | ಮೈಸೂರು ನಗರದ ಪಾದಚಾರಿ (ಫುಟ್ ಪಾತ್) ಮಾರ್ಗಗಳಲ್ಲಿ ಅಂಗಡಿ/ಹೋಟೆಲ್‌ಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ: (ಮಾಹಿತಿ ನೀಡುವುದು) | ಬಂದಿದೆ<br><br>ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:06.07.2026 ರಂದು ನಡೆದ ಸಾಮಾನ್ಯ ಕೌನ್ಸಿಲ್ ಸಭೆಯಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ, ಪಾದಚಾರಿಗಳು ಸುಗಮವಾಗಿ ಸಂಚರಿಸಲು ಮೊದಲ ಹಂತದಲ್ಲಿ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಹೆಚ್ಚಿನ ಜನ ಸಂದಣಿಯಿಂದ ಕೂಡಿದ ಪ್ರಮುಖ ರಸ್ತೆಗಳ ಪಾದಚಾರಿ ಮಾರ್ಗಗಳನ್ನು ಸಾರ್ವಜನಿಕರಿಗೆ ಸುಗಮವಾಗಿ ಸಂಚರಿಸಲು ಪಾದಚಾರಿ ಮಾರ್ಗಗಳನ್ನು ಅತಿಕ್ರಮಣ ಮಾಡಿಕೊಂಡಿರುವಂತಹ ಅಂಗಡಿ, ಹೋಟೆಲ್ ಮತ್ತು ಬೀದಿ ಬದಿ ವ್ಯಾಪಾರಿಗಳಿಗೆ ತಾವಾಗಿಯೇ ತೆರವುಗೊಳಿಸಲು, ಜಾಗೃತಿ ಮೂಡಿಸುವಂತೆ ಹಾಗೂ ತದನಂತರದಲ್ಲಿ ತೆರವುಗೊಳಿಸದಿದ್ದಲ್ಲಿ ಪೊಲೀಸ್ ಇಲಾಖೆ ಮತ್ತು ಪಾಲಿಕೆಯ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ಮಾಡಿ ತೆರವುಗೊಳಿಸಲು ಕ್ರಮಕೈಗೊಳ್ಳಲು ಸಂಬಂಧಪಟ್ಟ ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.<br><br>ಅದರಂತೆ, ದಿನಾಂಕ:20.07.2026 ರಂದು ಆಡಳಿತಾಧಿಕಾರಿಗಳು ಮತ್ತು ಆಯುಕ್ತರ ಅಧ್ಯಕ್ಷತೆಯಲ್ಲಿ ಸಭೆಯನ್ನು ಕೈಗೊಳ್ಳಲಾಗಿ, ಪಾದಚಾರಿ ಮಾರ್ಗ ತೆರವುಗೊಳಿಸಲು ಪಾಲಿಕೆ ವ್ಯಾಪ್ತಿಗೆ ಒಳಪಡುವ ಪ್ರಮುಖ ರಸ್ತೆಗಳಾದ ಸಯ್ಯಾಜಿರಾವ್ ರಸ್ತೆ, ಅಶೋಕ ರಸ್ತೆ, ಸಾಡೆ ರಸ್ತೆ, ಎಂ.ಜಿ ರಸ್ತೆ, ಉದಯರವಿ ರಸ್ತೆ, ನ್ಯೂ ಕಾಂತರಾಜ್ ಅರಸ್ ರಸ್ತೆ, ವಾಲ್ಮೀಕಿ ರಸ್ತೆ, ಗೋಕುಲಂ ಮುಖ್ಯರಸ್ತೆ, ಬಿ.ಎಂ ರಸ್ತೆ, ದಾವೋದ್ ಖಾನ್ ರಸ್ತೆ, ಹುಡ್ಕೋ ಮುಖ್ಯರಸ್ತೆ ಹಾಗೂ ಇತರ ಪ್ರಮುಖ ರಸ್ತೆಗಳಲ್ಲಿ ಫುಟ್‌ಪಾತ್ ಅನ್ನು ಒತ್ತುವರಿ ಮಾಡಿಕೊಂಡಿದ್ದ, ಅಂಗಡಿ ವ್ಯಾಪಾರಿಗಳು ಮತ್ತು ಬೀದಿಬದಿ ವ್ಯಾಪಾರಿಗಳಿಗೆ ಸಾರ್ವಜನಿಕರಿಗೆ ಸಂಚರಿಸಲು ಅನುಕೂಲವಾಗುವಂತೆ ತೆರವುಗೊಳಿಸಲು ಸೂಚಿಸಿ, ಜಾಗೃತಿ |
| ಆ) | ಸದರಿ ಫುಟ್ ಪಾತ್ ಮಾರ್ಗಗಳಲ್ಲಿ ಅಂಗಡಿ/ ಹೋಟೆಲ್‌ಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | |

| | | |
|---|---|---|
| | | ಮೂಡಿಸಿ, ತದನಂತರದಲ್ಲಿ ಅಧಿಕಾರಿಗಳು ಮತ್ತು ಪೊಲೀಸ್ ಇಲಾಖೆಯವರೊಂದಿಗೆ ಜಂಟಿಯಾಗಿ ಕಾರ್ಯಾಚರಣೆ ಕೈಗೊಂಡು ಫುಟ್‌ಪಾತ್ ಅತಿಕ್ರಮಣವನ್ನು ತೆರವುಗೊಳಿಸಲಾಗಿರುತ್ತದೆ.<br><br>ತೆರವುಗೊಳಿಸಿದ ಪಾದಚಾರಿ ಮಾರ್ಗಗಳಲ್ಲಿ ಕೆಲವು ಜಾಗಗಳಲ್ಲಿ ಪುನಃ ಬೀದಿಬದಿ ವ್ಯಾಪಾರಿಗಳು ಅತಿಕ್ರಮಣ ಮಾಡಿಕೊಂಡಿರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದು ಕಂಡು ಬಂದಿರುವುದರಿಂದ ದಿನಾಂಕ:17.08.2026 ರಂದು ಆಡಳಿತಾಧಿಕಾರಿಗಳು ಮತ್ತು ಆಯುಕ್ತರ ಅಧ್ಯಕ್ಷತೆಯಲ್ಲಿ ಪೊಲೀಸ್ ಇಲಾಖೆ ಮತ್ತು ಪಾಲಿಕೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಈ ಕೆಳಗಿನ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಪಾಲಿಕೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.<br><br>• ಪ್ರಮುಖ ರಸ್ತೆಗಳಲ್ಲಿ ಫುಟ್‌ಪಾತ್ ಅತಿಕ್ರಮಣದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು ಅಂತಹ ಸ್ಥಳಗಳಲ್ಲಿ ಪದೇ ಪದೇ ತೆರವು ಕಾರ್ಯಾಚರಣೆಯನ್ನು ಮಾಡಿ ಕಟ್ಟು ನಿಟ್ಟಿನ ಸೂಕ್ತ ಕಾನೂನು ಕ್ರಮಕೈಗೊಳ್ಳಲು ಸೂಚಿಸಲಾಯಿತು.<br>• ಫುಟ್‌ಪಾತ್ ಅನ್ನು ಅತಿಕ್ರಮಣ ಮಾಡಿರುವವರಿಗೆ ದಂಡ ವಿಧಿಸಲು ಸೂಚಿಸಲಾಯಿತು.<br>• ಮಾರ್ಷಲ್ ಮಾದರಿಯಲ್ಲಿ ತಂಡಗಳನ್ನು ರಚಿಸಿ ನಿರಂತರವಾಗಿ ಕಾರ್ಯಾಚರಣೆ ಮಾಡಿ ಫುಟ್ ಪಾತ್ ಅತಿಕ್ರಮಣವನ್ನು ತೆರವುಗೊಳಿಸುವುದು.<br>• ಪಾದಚಾರಿ ಮಾರ್ಗಗಳಲ್ಲಿ ನಿಲುಗಡೆ ಮಾಡಿರುವ ಅನಾಥ ವಾಹನಗಳನ್ನು ತೆರವುಗೊಳಿಸಲು ಸೂಕ್ತ ಕ್ರಮವಹಿಸುವುದು.<br>• ಪಾದಚಾರಿ ಮಾರ್ಗಗಳನ್ನು ಅತಿಕ್ರಮಣ ಮಾಡಿಕೊಂಡಿರುವ ಬೀದಿ ಬದಿ ವ್ಯಾಪಾರಿಗಳಿಗೆ ವ್ಯಾಪಾರ ಮಾಡಲು ಸೂಕ್ತ ಸ್ಥಳಗಳನ್ನು ಕಲ್ಪಿಸುವುದು. |

**ಸಂಖ್ಯೆ: ನಅಇ 154 ಎಸಿಎಂ 2026 (ಇ)**

**(ಡಾ. ಯತೀಂದ್ರ ಸಿದ್ದರಾಮಯ್ಯ)**
**ನಗರಾಭಿವೃದ್ಧಿ ಸಚಿವರು**